ಪ್ರೊ. ಎಸ್.ಜಿ. ಸಿದ್ಧರಾಮಯ್ಯ
ಅಧ್ಯಕ್ಷರು
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ಕಚೇರಿ: ಕೊಠಡಿ ಸಂಖ್ಯೆ ೨೦೬
೨ನೇ ಮಹಡಿ, ವಿಧಾನಸೌಧ
ಬೆಂಗಳೂರು-೫೬೦ ೦೦೧
ದೂರವಾಣಿ: ೦೮೦-೨೨೨೫೬೩೬೫
೨೨೦೩೩೫೧೯
ಸಂಚಾರವಾಣಿ-೯೪೪೮೯೪೯೭೩೭

ಸಂ.ಕಅಪ್ರಾ/ಅ/1371/೨೦೧೯

ದಿನಾಂಕ: ೧೪/೦೩/೨೦೧೯.

## ಅಭಿನಂದನಾ ಪತ್ರ

ವಿಶ್ವವಿದ್ಯಾಲಯ ಆಡಳಿತಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕರಿಗೆ ಮಾಹಿತಿ ಒದಗಿಸಲು ಮತ್ತು ಆಡಳಿತವನ್ನು ಸರಳಗೊಳಿಸಲು ವಿಶ್ವವಿದ್ಯಾಲಯವು ತನ್ನದೆಯಾದ ಜಾಲತಾಣವನ್ನು ನಿರ್ಮಿಸಿ ಅಂತರ್ಜಾಲದಲ್ಲಿ ಅಳವಡಿಸಿರುವುದು, ಸಾರ್ವಜನಿಕರ ಅನುಕೂಲದ ದೃಷ್ಟಿಯಿಂದ ಶ್ಲಾಘನೀಯ ಕಾರ್ಯವಾಗಿದೆ.

ಈ ನಿಟ್ಟಿನಲ್ಲಿ ತಮ್ಮ ವಿಶ್ವವಿದ್ಯಾಲಯದ ಅಂತರ್ಜಾಲ ತಾಣವು ಕನ್ನಡದಲ್ಲಿದ್ದು, ಮುಖಪುಟ ಹಾಗೂ ಒಳಪುಟಗಳ ಮಾಹಿತಿಗಳನ್ನೂ ಸಹ ಕನ್ನಡದಲ್ಲಿಯೇ ಸಾರ್ವಜನಿಕರಿಗೆ ನೀಡುತ್ತಿರುವುದು ಅಭಿನಂದನಾರ್ಹ. ರಾಜ್ಯಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿ ದಾಖಲಾಗುತ್ತದೆ. ನಮ್ಮ ಒತ್ತಾಸೆಗೆ ಸ್ಪಂದಿಸಿ ತಮ್ಮ ವಿಶ್ವವಿದ್ಯಾಲಯದ **ಅಂತರ್ಜಾಲ ತಾಣವನ್ನು ಸಂಪೂರ್ಣವಾಗಿ ಕನ್ನಡದಲ್ಲಿ ಅಭಿವೃದ್ಧಿಪಡಿಸಿ, ಮಾಹಿತಿಗಳನ್ನು ಕನ್ನಡದಲ್ಲಿ ಸಾರ್ವಜನಿಕರಿಗೆ ಒದಗಿಸುತ್ತಿರುವುದಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ತಮಗೆ ಅಭಿನಂದನೆಗಳನ್ನು ಸಲ್ಲಿಸುತ್ತದೆ.**

ಆಡಳಿತದ ಎಲ್ಲಾ ಹಂತಗಳಲ್ಲೂ ಕನ್ನಡವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ತಮ್ಮ ನಡೆ ಇತರರಿಗೆ ಮಾದರಿಯಾಗಲಿ ಎಂದು ಆಶಿಸುತ್ತೇವೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಪ್ರೊ. ಎಸ್.ಜಿ. ಸಿದ್ಧರಾಮಯ್ಯ)

ಗೆ,
**ಕುಲಸಚಿವರು (ಆಡಳಿತ),**
**ಕುವೆಂಪು ವಿಶ್ವವಿದ್ಯಾಲಯ,**
ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ.